# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2331(2727)
ಸದಸ್ಯರ ಹೆಸರು : ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 28-03-2022
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರ ಪ್ರೌಢ ಶಾಲೆಯ ಸಹ ಶಿಕ್ಷಕರುಗಳಿಗೆ ಪದವಿ ಪೂರ್ವ ಕಾಲೇಜುಗಳಿಗೆ ಬಡ್ತಿ ನೀಡಲಾಗುತ್ತಿದೆಯೇ: | ಹೌದು. |
| ಆ) | ಈ ಹಿಂದೆ ಎಷ್ಟು ಶಿಕ್ಷಕರುಗಳಿಗೆ ಬಡ್ತಿಯನ್ನು ಯಾವ ದಿನಾಂಕದವರೆಗೆ ನೀಡಲಾಗಿತ್ತು; | 1998 ರಿಂದ 2011 ರವರೆಗೆ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಯ ವೃಂದದಿಂದ ಉಪನ್ಯಾಸಕರ ಹುದ್ದೆಯ ವೃಂದಕ್ಕೆ 5737 ಸಹಶಿಕ್ಷಕರಿಗೆ ಪದೋನ್ನತಿ ನೀಡಲಾಗಿದೆ. |
| ಇ) | ಕಳೆದ ಸುಮಾರು 7-8 ವರ್ಷಗಳಿಂದ ಶಿಕ್ಷಕರುಗಳಿಗೆ ಬಡ್ತಿ ನೀಡದಿರಲು ಕಾರಣಗಳೇನು; | ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 71 ಎಸ್‌ಆರ್‌ಇ 94 ದಿನಾಂಕ: 27/05/1998ರಲ್ಲಿ ಶೇಕಡ 50ರಷ್ಟು ಉಪನ್ಯಾಸಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮತ್ತು ಶೇಕಡ 50ರಷ್ಟು ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರ ವೃಂದಕ್ಕೆ ಬಡ್ತಿ ನೀಡಲು ಅವಕಾಶ ಕಲ್ಪಿಸಲಾಗಿತ್ತು. ಆದರೆ, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 35 ಡಿಜಿಡಿ 2009 ದಿನಾಂಕ:15/05/2014ರಲ್ಲಿ ವೃಂದ ಮತ್ತು ನೇಮಕಾತಿ ನಿಯಮಕ್ಕೆ ಪರಿಷ್ಕರಣೆ ಮಾಡಿ ಶೇಕಡ 75ರಷ್ಟು ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮತ್ತು ಶೇಕಡ 25ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿದೆ. ಈ ಹಿನ್ನೆಲೆಯಲ್ಲಿ, ಬಡ್ತಿ ಕೋಟಾದಲ್ಲಿ ಶೇಕಡ 50ರಷ್ಟು ಪದೋನ್ನತಿ ನೀಡಿದ್ದರಿಂದ ಈಗಾಗಲೇ 395 ಹುದ್ದೆಗಳು ಹೆಚ್ಚುವರಿಯಾಗಿರುತ್ತವೆ. |
| ಈ) | ಹಳೆ ನಿಯಮಾವಳಿ ತಿದ್ದುಪಡಿಯಾಗಿ ಹೊಸ ನಿಯಮಾವಳಿ ರೂಪಿಸಿದರೂ ಕೂಡ ಬಡ್ತಿ ನೀಡದಿರಲು ಕಾರಣಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | 1998ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗಳನ್ನು ಶೇ.50ರಷ್ಟು ನೇರ ನೇಮಕಾತಿ ಮೂಲಕ ಹಾಗೂ ಶೇ.50ರಷ್ಟು ಹುದ್ದೆಗಳನ್ನು ಸರ್ಕಾರಿ ಸಹಶಿಕ್ಷಕ ವೃಂದದಿಂದ ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿತ್ತು. ಆದರೆ, 2014ರ ವೃಂದ ಮತ್ತು |

| | | |
|---|---|---|
| | | ನೇಮಕಾತಿ ನಿಯಮಗಳಲ್ಲಿ, ಹಿಂದಿನ ಶೇ.50:50ರ ಬದಲಾಗಿ, ಶೇ.75:25ಕ್ಕೆ ನಿಗದಿಗೊಳಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಬಡ್ತಿ ಕೋಟಾದಲ್ಲಿ ಶೇಕಡ 50ರಷ್ಟು ಪದೋನ್ನತಿ ನೀಡಿದ್ದರಿಂದ ಈಗಾಗಲೇ 395 ಹುದ್ದೆಗಳು ಹೆಚ್ಚುವರಿಯಾಗಿರುತ್ತದೆ. ಆದ್ದರಿಂದ, ಚಾಲ್ತಿಯಲ್ಲಿರುವ ನಿಯಮಾವಳಿ ಪ್ರಕಾರ ಶೇಕಡ 75:25ರ ಬಡ್ತಿ ಕೋಟಾದ ಹುದ್ದೆಗಳು ಲಭ್ಯವಿಲ್ಲದಿದ್ದರಿಂದ, ಬಡ್ತಿ ನೀಡಲಾಗಿರುವುದಿಲ್ಲ. ಮುಂದಿನ ದಿನಗಳಲ್ಲಿ ಬಡ್ತಿ ಕೋಟಾದಡಿ ಉದ್ಭವವಾಗುವ ಖಾಲಿ ಹುದ್ದೆಗಳನ್ನು ಗುರುತಿಸಿ, ಸರ್ಕಾರದ ಅಧಿಕೃತ ಜ್ಞಾಪನ ಸಿಆಸುಇ 106 ಸೇನೆನಿ 2021 ದಿನಾಂಕ:10-12-2021ರಂತೆ ಬಡ್ತಿ ನೀಡುವ ಕುರಿತು ನಿಯಮಾನುಸಾರ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದು. |

**ಸಂಖ್ಯೆ: ಇಪಿ 67 ಡಿಜಿಡಬ್ಲ್ಯೂ 2022**

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು